ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 956

ಸದಸ್ಯರ ಹೆಸರು : ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 24-02-2022.

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ.	ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸಿಬ್ಬಂದಿಗಳಿಗೆ ಬಡ್ತಿ ನೀಡಲು ಅನುಕೂಲವಾಗುವಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಇದುವರೆವಿಗೂ ಪರಿಷ್ಕರಿಸದಿರಲು ಕಾರಣಗಳೇನು; (ವಿವರ ನೀಡುವುದು)	ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಎಂಡಬ್ಲ್ಯೂಡಿ 154 ಎಂಡಿಎಸ್ 2010, ದಿನಾಂಕ:15.03.2011ರಲ್ಲಿ ರಚಿಸಲಾಗಿರುತ್ತದೆ. 2011ರ ನಂತರ ಹೊಸದಾಗಿ ಸೃಜಿಸಿ ಮಂಜೂರಾಗಿರುವ ಸುಮಾರು 50 ವಿವಿಧ ವೃಂದಗಳ ಹುದ್ದೆಗಳನ್ನು ಸೇರಿಸಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿರುತ್ತದೆ.
ಆ.	ಯಾವ ಕಾಲಮಿತಿಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಣೆ ಮಾಡಲಾಗುತ್ತದೆ;	ಪ್ರಸ್ತುತ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿರುವುದರಿಂದ ಅನುಮೋದನೆ ಪಡೆದ ಕೂಡಲೇ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರಕಟಿಸಲಾಗುವುದು.
ಇ.	ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಬೋಧಕ ಸಿಬ್ಬಂದಿಗೆ ಕುಮಾರ್‌ನಾಯಕ್ ವರದಿಯನ್ವಯ ಒಂದು ವೇತನ ಬಡ್ತಿ ನೀಡಲು ಶಿಫಾರಸ್ಸು ಮಾಡಲಾಗಿದೆಯೇ;	ಶಿಕ್ಷಣ ಇಲಾಖೆ (ಪ್ರೌಢ ಶಿಕ್ಷಣ) ದಿ:15.04.2016ರ ಆದೇಶದ ಅನುಸಾರ ಜೂನ್-2016 ರಂದು ಕಾರ್ಯನಿರ್ವಹಿಸುತ್ತಿದ್ದ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಿದ್ದು, ಈ ಇಲಾಖೆಯಿಂದ ಅದೇ ಅವಧಿಯಲ್ಲಿ ನೇಮಕಗೊಂಡಿರುವುದರಿಂದ ಈ ಬಗ್ಗೆ ಪರಿಶೀಲಿಸಿ ಆದಷ್ಟು ಬೇಗ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.
ಈ.	ಕುಮಾರ್‌ನಾಯಕ್ ವರದಿಯನ್ವಯ ಸದರಿ ಬೋಧಕ ಸಿಬ್ಬಂದಿಗೆ ಯಾವ ಕಾಲಮಿತಿಯಲ್ಲಿ ವೇತನ ಬಡ್ತಿ ನೀಡಲಾಗುವುದು? (ವಿವರ ನೀಡುವುದು)	ಈ ಬಗ್ಗೆ ಪರಿಶೀಲಿಸಿ ಆದಷ್ಟು ಬೇಗ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: **MWD 63 LMQ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ